## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s G.M.Navarra Wind Energy Private Limited ಕಂಪನಿಗೆ ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 60 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಬದಲಾಗಿ 40 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಸಿಮೀತಗೊಳಿಸಿ ಹಂಚಿಕೆ ಆದೇಶ ನೀಡುವ ಬಗ್ಗೆ

ಓದಲಾಗಿದೆ:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KREDL/ 08/ GMNWEPL-60MW/ Itnal.Belgaum/ 2016/1423-G
2. ಸರ್ಕಾರದಲ್ಲಿ ದಿನಾಂಕ: 19.12.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.
3. ಸರ್ಕಾರದ ಪತ್ರ ಸಂಖ್ಯೆ: ಇಎನ್ 358 ಎನ್‌ಸಿಇ 2016, ದಿನಾಂಕ: 16.02.2017
4. ಸರ್ಕಾರದ ಪತ್ರ ಸಂಖ್ಯೆ: ಇಎನ್ 358 ಎನ್‌ಸಿಇ 2016, ದಿನಾಂಕ: 18.02.2017
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KRED/08/ GMNWEPL-40 MW/2017/2156, ದಿನಾಂಕ: 24.03.2017

* * *

**ಪ್ರಸ್ತಾವನೆ :-**

M/s G.M.Navarra Wind Energy Private Limited ಕಂಪನಿಯವರು ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ : 19.12.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s G.M.Navarra Wind Energy Private Limited ಕಂಪನಿಯವರು ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸುವ ಷರತ್ತಿಗೊಳಪಟ್ಟು ತಾತ್ವಿಕ ಅನುಮೋದನೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

--2)

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರದ ಪತ್ರದನ್ವಯ M/s Gamesa Renewable Private Limited ಕಂಪನಿಯವರು ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಬಗ್ಗೆ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ (DPR) ಯನ್ನು ಎರಡು ವರ್ಷದೊಳಗಾಗಿ ತಯಾರಿಸಿ, ನಿಯಮಾನುಸಾರ ಪಾವತಿಸಬೇಕಾದ ಶುಲ್ಕದೊಂದಿಗೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸತಕ್ಕದೆಂಬ ಷರತ್ತಿಗೊಳಪಟ್ಟು ಸದರಿ ಯೋಜನೆಗೆ ಸರ್ಕಾರದ ತಾತ್ವಿಕ ಅನುಮತಿಯನ್ನು ನೀಡಲಾಗಿತ್ತು.

ಈ ಮಧ್ಯೆ, ಅಭಿವೃದ್ಧಿದಾರರು ದಿನಾಂಕ : 13.02.2017 ರ ಪತ್ರದಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿ ಹಂಚಿಕೆ ಪ್ರಸ್ತಾವನೆಯೊಂದಿಗೆ ತಾವು ಸಲ್ಲಿಸಿರುವ ಡಿಎಫ್ಆರ್ ಅನ್ನು ಡಿಪಿಆರ್ ಎಂದು ಪರಿಗಣಿಸಿ, ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ. ಅಭಿವೃದ್ಧಿದಾರರು ಸಲ್ಲಿಸಿರುವ ಮನವಿಯನ್ನು ನಿಯಮಾನುಸಾರ ಪರಿಶೀಲಿಸಿ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (4) ಸರ್ಕಾರದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು M/s Gamesa Renewable Private Limited ಕಂಪನಿಗೆ ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಬದಲಾಗಿ ವಾಸ್ತವಿಕ ಸಾಮರ್ಥ್ಯವಾದ 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಡಿಪಿಆರ್ ಶುಲ್ಕವನ್ನು ಅಭಿವೃದ್ಧಿದಾರರು ಪಾವತಿ ಮಾಡಿರುವುದರಿಂದ, ಸದರಿ ಕಂಪನಿಗೆ 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶವನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಎನ್ 358 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 20.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು M/s G.M.Navarra Wind Energy Private Limited ಕಂಪನಿಗೆ ಬೆಳಗಾವಿ ಜಿಲ್ಲೆ ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕುಗಳ ಸಟ್ಟಿಗೇರಿ, ಗುನಮಡಕೇರಿ, ಕೋರಕೊಪ್ಪ ಮತ್ತು ಕುರಬಗಟ್ಟ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಬದಲಾಗಿ ವಾಸ್ತವಿಕ ಸಾಮರ್ಥ್ಯವಾದ 40 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

--3

Schedule

Geographical area description for 40 MW capacity wind power project

| Sl.No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 47 P/4 | 40 MW<br>(20 Nos x 2000 kW) | Sattigeri, Gunamadakeri, Korakoppa & Kurabagatta villages, Ramdurga & Soudatti Taluks, Belgaum district | The identified area is covered in Private. The area is surrounded by points A-B-C-D-E-F-G-H-I-A and are held in the following Geographical co-ordinates as:<br>**Point A**:Lat:16°59'44.52''N Long: 75°1'3''E<br>**Point B**:Lat:16°2'24.36''N Long: 75°0.96'57.6''E<br>**Point C**:Lat:16°4'48.36''N, Long: 75°3'6.48''E<br>**Point D**:Lat:16°4'49.08''N Long:75°4'48''E<br>**Point E**:Lat:16°3'57.6'''N Long:75°4'47.28''E<br>**Point F**:Lat:16°3'52.2''N Long:75°4'2.64''E<br>**Point G**:Lat:16°1'11.28''N Long:75°4'3.36''E<br>**Point H**:Lat:16°1'13.08''N Long:75°5'46.68''E<br>**Point I**:Lat:16°59'46.32''N Long:75°5'49.56''E<br>Peaks: 671, 673, 665, 687, 679, 629 & 702 m AMSL. |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು/ ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು / ಸ್ವಂತ ಬಳಕೆ ಮಾಡಿಕೊಳ್ಳಲು ಕೂಡ ಅನುಮತಿಸಲಾಗಿದೆ.

.....4